ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 :** **ಏಪ್ರಿಲ್ 28, 2020**

# ಪತ್ರಿಕಾ ಪ್ರಕಟಣೆ

## ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ
## ನೂತನ ಅಧ್ಯಕ್ಷರಾಗಿ ಪ್ರೊ. ಎಸ್. ಅಯ್ಯಪ್ಪನ್ ಆಯ್ಕೆ

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ): ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗ ಸಂಸ್ಥೆಯಾದ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ನೂತನ ಅಧ್ಯಕ್ಷರಾಗಿ **ಪ್ರಖ್ಯಾತ ವಿಜ್ಞಾನಿ ಪ್ರೊ. ಎಸ್. ಅಯ್ಯಪ್ಪನ್** ಅವರನ್ನು ನೇಮಿಸಿ ಸರ್ಕಾರ ಆದೇಶ ಹೊರಡಿಸಿದೆ.

ಪ್ರಖ್ಯಾತ ವಿಜ್ಞಾನಿ ಪ್ರೊ. ಎಸ್. ಅಯ್ಯಪ್ಪನ್, ನಿವೃತ್ತ ಮಹಾನಿರ್ದೇಶಕರು, ಭಾರತೀಯ ಕೃಷಿ ಸಂಶೋಧನಾಪರಿಷತ್(Indian Council of Agricultural Research - ICAR) ಹಾಗೂ ಸರ್ಕಾರದ ಕಾರ್ಯದರ್ಶಿ, ಕೃಷಿ ಸಂಶೋಧನೆ ಹಾಗೂ ಶಿಕ್ಷಣ ಇಲಾಖೆ (Department of Agricultural Research and Education - DARE), ಭಾರತ ಸರ್ಕಾರ/ ಕುಲಾಧಿಪತಿಗಳು, ಕೇಂದ್ರೀಯ ಕೃಷಿ ವಿಶ್ವವಿದ್ಯಾಲಯ, ಮಣಿಪುರ ಇವರ ಅಧ್ಯಕ್ಷತೆಯಲ್ಲಿ 3 ವರ್ಷಗಳ ಅವಧಿಗೆ ಪುನರ್‌ರಚಿಸಲಾಗಿದೆ. ಸದರಿ ಸಮಿತಿಯು 13 ಸದಸ್ಯರುಗಳನ್ನು ಒಳಗೊಂಡಿದ್ದು, ಖ್ಯಾತ ಶಿಕ್ಷಣ ತಜ್ಞರು, ಹೆಸರಾಂತ ವಿಜ್ಞಾನಿಗಳು ಮತ್ತು ಸರ್ಕಾರದ ಹಿರಿಯ ಆಡಳಿತಗಾರರು ಸದಸ್ಯರಾಗಿದ್ದಾರೆ

ಜುಲೈ 2005 ರಲ್ಲಿ ಪ್ರಸಿದ್ಧ ಬಾಹ್ಯಾಕಾಶ ವಿಜ್ಞಾನಿ ಹಾಗೂ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ನಿವೃತ್ತ ಅಧ್ಯಕ್ಷರಾಗಿದ್ದ ಪದ್ಮವಿಭೂಷಣ ದಿವಂಗತ ಪ್ರೊ. ಯು.ಆರ್. ರಾವ್ ಅವರ ಅಧ್ಯಕ್ಷತೆಯಲ್ಲಿ ಸ್ಥಾಪಿಸಲಾಗಿದೆ. ಅಕಾಡೆಮಿಗೆ ಪ್ರತಿ ಮೂರು ವರ್ಷಗಳಗೊಮ್ಮೆ ನೂತನ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ಸರ್ಕಾರದಿಂದ ನಾಮನಿರ್ದೇಶನ ಮಾಡಲಾಗುತ್ತಿದೆ.

ಅಕಾಡೆಮಿಯು ಕಳೆದ ಸುಮಾರು 15 ವರ್ಷಗಳಿಂದ ವಿಜ್ಞಾನ ಶಿಕ್ಷಣವನ್ನು ವಿವಿಧ ಸ್ಥರಗಳಲ್ಲಿ ಸದೃಢಗೊಳಿಸಲು, ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆಯನ್ನು ಬೆಳೆಸಲು ಹಾಗೂ ಜನಸಾಮಾನ್ಯರಲ್ಲಿ ವೈಜ್ಞಾನಿಕ ಅರಿವನ್ನು

ಮೂಡಿಸಲು ಪೂರಕವಾಗುವ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ಯಶಸ್ವಿಯಾಗಿ ಆಯೋಜಿಸಿಕೊಂಡು ಬರುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.

**Prof. S. Ayyappan**
**Chairman**
**Karnataka Science and Technology Academy**

Bengaluru, April 28 (Karataka Information): Karnataka Science and Technology Academy (KSTA), an autonomous organisation under the the Department of Science and Technology, was established by the Government of Karnataka in July 2005 under the Chairmanship of Distinguished Space Scientist Padma Vibhushan Late Prof. U. R. Rao, Former Chairman, ISRO/Secretary, DOS, Govt. of India. The Governing Council of KSTA is being reconstituted once in every three years by the Government. Now, the State Government has reconstituted the Governing Council under the Chairmanship of Distinguished Scientist**Prof. S. Ayyappan, Former Director General, Indian Council of Agricultural Research** (ICAR) &Secretary to Government, Department of Agricultural Research and Education (DARE)/ Chancellor, Central Agricultural University, Manipur with 13 members comprising of eminent educationists, renowned scientists and senior administrators for a period of three years.

KSTA has been carrying out a large number of dove-tailed programs to promote STEM education and to develop scientific temper among students studying at different levels in an educational pyramid as well as to popularise science among general public across the State for the last 15 years.

**ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯಲ್ಲಿ ಸಹಾಯಕ ಪ್ರಧಾನ ವ್ಯವಸ್ಥಾಪಕರ ಹುದ್ದೆಗಳ**
**ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ**

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ): ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 06-12-2018ರ ಅಧಿಸೂಚನೆಯಲ್ಲಿ ಅಧಿಸೂಚಿಸಿದ ಕಾರ್ಮಿಕ ರಾಜ್ಯ ವಿಮಾ ಯೋಜನೆ ವೈದ್ಯಕೀಯ ಸೇವೆಗಳ ಇಲಾಖೆಯಲ್ಲಿ ವಿಮಾ ವೈದ್ಯಾಧಿಕಾರಿ – 143 + 16(ಹೈಕ) ಹುದ್ದೆಗಳು ಮತ್ತು **ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯಲ್ಲಿ ಸಹಾಯಕ ಪ್ರಧಾನ ವ್ಯವಸ್ಥಾಪಕರು- 09 +01(ಹೈಕ) ಹುದ್ದೆಗಳ** ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ದಿನಾಂಕ:24-04-2020 / 27-04-2020 ರಂದು ಮತ್ತು ದಿನಾಂಕ 23-03-2018ರ ಅಧಿಸೂಚನೆಯಲ್ಲಿ ಅಧಿಸೂಚಿಸಿದ ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿ ಇತಿಹಾಸ ಉಪನ್ಯಾಸಕರು - 07 + 03(ಹೈಕ) ಹುದ್ದೆಗಳು / ಜೀವಶಾಸ್ತ್ರ ಉಪನ್ಯಾಸಕರು - 07 + 03(ಹೈಕ) ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ದಿ: 27-04-2020 ರಂದು ಆಯೋಗದ ಅಂತರ್ಜಾಲ "http://kpsc.kar.nic.in/ Selection Lists" ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಸದರಿ ಆಯ್ಕೆಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು 07 ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು - 560001, ಇವರಿಗೆ ಸಲ್ಲಿಸಬಹುದೆಂದು, ಇದಲ್ಲದೇ ಆಕ್ಷೇಪಣೆಗಳನ್ನು ಇ-ಮೇಲ್ kpsc-ka@nic.in ಮುಖಾಂತರವು ಸಲ್ಲಿಸಬಹುದು ಹಾಗೂ ನಿಗದಿತ ದಿನಾಂಕದ ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಈ ಮೂಲಕ ತಿಳಿಸಿದೆ.

## ಅಂತಿಮ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಏಪ್ರಿಲ್ 28 (ಕರ್ನಾಟಕ ವಾರ್ತೆ):ಕರ್ನಾಟಕ ಲೋಕಸೇವಾ ಆಯೋಗದ ಅಧಿಸೂಚನೆ ದಿನಾಂಕ: 15.03.2017ರಲ್ಲಿ ಮತ್ತು ಸೇರ್ಪಡೆ ಅಧಿಸೂಚನೆ ದಿನಾಂಕ: 15.04.2017ರಲ್ಲಿ ಅಧಿಸೂಚಿಸಲಾಗಿರುವ ಈ ಕೆಳಕಂಡ ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ದಿ: 27.04.2020 ರಂದು ಆಯೋಗದ ವೆಬ್ ಸೈಟ್ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

| ಕ್ರ ಸಂ | ಇಲಾಖೆ ಮತ್ತು ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ | | ಒಟ್ಟು ಹುದ್ದೆಗಳ ಸಂಖ್ಯೆ |
|---|---|---|---|---|
| | | RPC | HK | |
| 1 | ಪೌರಾಡಳಿತ ನಿರ್ದೇಶನಾಲಯದಲ್ಲಿನ (ನಗರ ಸ್ಥಳೀಯ ಸಂಸ್ಥೆಗಳು) ಅಕೌಂಟೆಂಟ್ | 26 | – | 26 |
| 2 | ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ (ನವೋದಯ) ಯಲ್ಲಿನ ದೈಹಿಕ ಶಿಕ್ಷಕರು | 04 | 02 | 06 |
| 3 | ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ (ನವೋದಯ) ಯಲ್ಲಿನ ಕಲಾ ಶಿಕ್ಷಕರು | 02 | 02 | 04 |

| | | | | |
|---|---|---|---|---|
| 4 | ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ (ನವೋದಯ) ಯಲ್ಲಿನ ಪ್ರಥಮ ದರ್ಜೆ ಗಣಕಯಂತ್ರ ಸಹಾಯಕರು | 01 | 01 | 02 |
| 5 | ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ (ನವೋದಯ) ಯಲ್ಲಿನ ಉಗ್ರಾಣ ನಿಯಂತ್ರಕರು/ ವಾರ್ಡನ್ | 01 | 01 | 02 |
| 6 | ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ (ನವೋದಯ) ಯಲ್ಲಿನ ಕ್ಯಾಟರಿಂಗ್ ಸೂಪರ್‌ವೈಸರ್/ ನಿಲಯಪಾಲಕರು | 01 | 01 | 02 |
| 7 | ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿ ಕಿರಿಯ ಲೆಕ್ಕ ಸಹಾಯಕರು | 42 | 0 | 42 |
| 8 | ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಲ್ಲಿನ ಡಾಟಾ ಎಂಟ್ರಿ ಆಪರೇಟರ್ | – | 01 | 01 |

ಮುಂದುವರೆದು, ಆಯೋಗದ ದಿ: 05.10.2016ರ ಅಧಿಸೂಚನೆಯಲ್ಲಿ ಅಧಿಸೂಚಿಸಲಾಗಿರುವ ಪೌರಾಡಳಿತ ಇಲಾಖೆಯಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಅಕೌಂಟೆಂಟ್ 8 (ಹೈ.ಕ.) ಮತ್ತು ಕಾನೂನು ಮಾಪನ ಶಾಸ್ತ್ರ ಇಲಾಖೆಯಲ್ಲಿನ ಕಾನೂನು ಮಾಪನ ನಿರೀಕ್ಷಕರು 2 (ಹೈ.ಕ.) ಹುದ್ದೆಗಳ ಹೆಚ್ಚುವರಿ ಆಯ್ಕೆಪಟ್ಟಿಯನ್ನು ದಿ: 27.04.2020 ರಂದು ಆಯೋಗದ ವೆಬ್ ಸೈಟ್ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

## ಆದಿಶಂಕರರ ಜಯಂತಿ ಉದ್ಘಾಟನೆ

**ಬೆಂಗಳೂರು, ಏಪ್ರಿಲ್ 28 ( ಕರ್ನಾಟಕ ವಾರ್ತೆ ) :ತತ್ವಜ್ಞಾನಿ ಆದಿಶಂಕರರ ಜಯಂತಿಯನ್ನು ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಮತ್ತು ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವ ಸಿ.ಟಿ. ರವಿಯವರು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.**

**ಸನಾತನ ಭಾರತದ ಸಂಸ್ಕೃತಿಯನ್ನು ಜಗತ್ತಿಗೆ ಸಾರಿ ಹೇಳಿದವರಲ್ಲಿ ಶ್ರೀ ಆದಿಶಂಕರಾಚಾರ್ಯರು ಅಗ್ರಗಣ್ಯರು. ಇವರು ತಮ್ಮ ಜೀವಿತಾವಧಿಯ 32 ವರ್ಷಗಳಲ್ಲಿ ಇಡೀ ಅಖಂಡ ಭಾರತವನ್ನು ಕಾಲ್ನಡಿಗೆಯಲ್ಲಿ ಸಂಚರಿಸಿ, ಅದ್ವೈತ ತತ್ವವನ್ನು ಪ್ರಚುರಪಡಿಸಿ ನಾಲ್ಕು ಪೀಠಗಳನ್ನು ದೇಶದ ನಾಲ್ಕು ದಿಕ್ಕುಗಳಲ್ಲಿ ಸ್ಥಾಪಿಸಿ, ಬ್ರಹ್ಮ ಸೂತ್ರಗಳಿಗೆ ಬಾಷ್ಯ ಬರೆದು, ಉಪನಿಷತ್ ಹಾಗೂ ಭಗವದ್ಗೀತೆಗಳಿಗೆ ಬಾಷ್ಯ ಬರೆದ ತತ್ವಜ್ಞಾನಿ ಶ್ರೀ ಆದಿಶಂಕರರು.**

**"ಅಹ ಬ್ರಹ್ಮಾಸ್ಮಿ" ನನ್ನೊಳಗಿನ ಆತ್ಮವೇ ಪರಮಾತ್ಮ ಆತ್ಮ ಪರಮಾತ್ಮ ಬೇರೆ ಅಲ್ಲ. ಈ ಜಗತ್ತಿನಲ್ಲಿ ಎಲ್ಲವೂ ಪರಮಾತ್ಮನಿಂದಲೇ ಅವರಿಸಲ;ಪಟ್ಟಿದೆ ಎಂದು ಜಗತ್ತಿಗೆ ಸಾರಿದರು. ಆ ಮೂಲಕ ಇಡೀ ಸೃಷ್ಟಿಯೇ ಭಗವಂತನದು ಎಂದು ಸಾರಿದರು. ಚಾಂಡಾಲನಲ್ಲೂ ಅರಿವನ್ನು ಮೂಡಿಸದ ಗುರುವನ್ನು ಕಂಡ ನಿರಹಂಕಾರಿ ಸನ್ಯಾಸಿ ಶ್ರೀ ಆದಿಶಂಕರರು.**

**ಸನಾತನ ಧರ್ಮದ ಚೌಕಟ್ಟಿನಿಂದ ದೂರ ಉಳಿದಿದ್ದ ವಿವಿಧ ಮತಗಳನ್ನು ಸಂಸ್ಕರಿಸಿ ಪುನಃ ಸನಾತನ ಧರ್ಮದ ಮೌಲ್ಯಗಳನ್ನು ಪ್ರತಿಷ್ಠಾಪಿಸಿದರು. ಇಂತಹ ಆದಿಶಂಕರರ ಜಯಂತಿ ನಮ್ಮೊಳಗಿನ ಭೇದ-ಭಾವಗಳನ್ನು ದೂರ ಮಾಡಿ**

ಜಾತೀಯತೆ, ಅಸ್ಪೃಶ್ಯತೆ, ಅಹಂಕಾರ ಮುಕ್ತ "ಸರ್ವಂ ಬ್ರಹ್ಮಮಯಯಂ" ಎಂಬ ತತ್ವವನ್ನು ಎಲ್ಲರಿಗೂ ಪ್ರೇರೇಪಿಸಲಿ ಎಂದು ಆಶಿಸಿದರು. ಈ ಸಂದರ್ಭದಲ್ಲಿ ಇಲಾಖಾ ನಿರ್ದೇಶಕರಾದ ಶ್ರೀ ಎಸ್ ರಂಗಪ್ಪನವರು ಉಪಸ್ಥಿತರಿದ್ದರು.

## ಮಾಧ್ಯಮಗಳಲ್ಲಿ ಕನ್ನಡಭಾಷೆ ಬಳಸಲು ಮನವಿ

ಬೆಂಗಳೂರು, ಏಪ್ರಿಲ್ 28 ( ಕರ್ನಾಟಕ ವಾರ್ತೆ ) : ವಿದ್ಯುನ್ಮಾನ ಮಾಧ್ಯಮಗಳು ಸದಭಿರುಚಿ ಶಿಷ್ಟಾಚಾರವುಳ್ಳ ಶುದ್ಧ ಕನ್ನಡ ಭಾಷಾ ಪ್ರಯೋಗಕ್ಕೆ ಒತ್ತು ನೀಡುವ ದೃಷ್ಟಿಯಿಂದ ಫೆಬ್ರವರಿ 11, 2020ರಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ಮಾಧ್ಯಮ ಅಕಾಡೆಮಿಯ ಸಹಯೋಗದಲ್ಲಿ ಕನ್ನಡ ಭಾಷಾ ಬಳಕೆ ಕುರಿತು ಸಂವಾದ ನಡೆದಿರುವುದು ತಮಗೆ ತಿಳಿದ ವಿಷವೇ ಸರಿ.

ಸಂವಾದದ ಸಂದರ್ಭದಲ್ಲಿ ಸದಭಿರುಚಿಯ ಪ್ರಚಲಿತ ಶುದ್ಧ ಕನ್ನಡ ಪದಗಳನ್ನು ಬಳಸುವಂತೆ ಎಲ್ಲಾ ಮಾಧ್ಯಮಗಳ ಸಂಪಾದಕರುಗಳ ಗಮನ ಸೆಳೆಯುವುದು ಸೂಕ್ತವೆಂದು ಭಾವಿಸುತ್ತಾ ಈ ಪತ್ರ ಬರೆಯುತ್ತಿದ್ದೇನೆ.

ಪ್ರಸ್ತುತ ರಾಜ್ಯ ಎದುರಿಸುತ್ತಿರುವ ಕೊರೋನಾ ಸಾಂಕ್ರಾಮಿಕ ರೋಗದ ಸನ್ನಿವೇಶದಲ್ಲಿ ಮಾಧ್ಯಮಗಳು ಅದರಲ್ಲೂ ವಿಶೇಷವಾಗಿ ವಿದ್ಯುನ್ಮಾನ ಮಾಧ್ಯಮಗಳು ಸಾರ್ವಜನಿಕರಿಗೆ ಮಾಹಿತಿ ತಲುಪಿಸುವಲ್ಲಿ ಅರ್ಥಪೂರ್ಣ ಕೆಲಸ ಮಾಡುತ್ತಿರುವುದು ಅಭಿನಂದನೀಯ.

ಇದೇ ಹೊತ್ತಿನಲ್ಲಿ ಪ್ರಸಾರ / ಮುದ್ರಣದಲ್ಲಿ ಬಳಸುವ ಕನ್ನಡ ಭಾಷೆಯ ಬಗ್ಗೆಯೂ ಅಷ್ಟೇ ಕಾಳಜಿ ವಹಿಸಿದರೆ ತಾವು ಇನ್ನೂ ಹೆಚ್ಚಿನ ಜನರನ್ನು ತಲುಪುವಂತಾಗುತ್ತಿತ್ತು ಎನ್ನುವುದು ನನ್ನ ಅಭಿಪ್ರಾಯ. ತಾವು ದಿನದ 24 ಗಂಟೆಯು ಕ್ಷಣ ಕ್ಷಣದ ಬೆಳವಣಿಗೆಯ ಮಾಹಿತಿಯನ್ನು ಸುದ್ದಿ ರೂಪದಲ್ಲಿ ಸಿದ್ದಪಡಿಸಿಕೊಳ್ಳಲು ಸಮಯವೇ ಇರುವುದಿಲ್ಲ ಒತ್ತಡದಲ್ಲಿ ಕೆಲಸ ಮಾಡುವುದು ಅನಿವಾರ್ಯವಾಗುತ್ತದೆ.

ಆದರೂ ಸುಲಭವಾಗಿ ಕನ್ನಡ ಪದಗಳನ್ನು ಬಳಸಬಹುದಾದ ಸಂದರ್ಭದಲ್ಲೂ ಹೆಚ್ಚಿನವರು ಆಂಗ್ಲ ಪದಗಳನ್ನು ಬಳಸುವುದು ಕಂಡುಬಂದಿದೆ. ಇದು ಕನ್ನಡ ಭಾಷಾ ಬೆಳವಣಿಗೆಗೆ ಮಾರಕವಾಗುತ್ತದೆ. ಸಮೂಹ ಮಾಧ್ಯಮವನ್ನೇ ಹೆಚ್ಚಾಗಿ ನಂಬಿರುವ ಜನರು ಮಾಹಿತಿಯ ಜೊತೆಗೆ ಭಾಷೆಯನ್ನು ಕಲಿಯುತ್ತಾರೆ ಎನ್ನುವುದನ್ನು ತಾವು ಅರ್ಥಮಾಡಿಕೊಳ್ಳುವಿರಾಗಿ ಭಾವಿಸುತ್ತೇನೆ.

ವಿದ್ಯನ್ಮಾನ ಮಾಧ್ಯಮಗಳು ಬಳಸುವ ಭಾಷೆಯ ಬಗ್ಗೆ ಬಳಸುವ ಪದಪುಂಜಗಳ ಬಗ್ಗೆ ಸಾರ್ವಜನಿಕರಿಂದ ಬಹಳಷ್ಟು ಸಲಹೆಗಳನ್ನು ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಮಾಧ್ಯಮಗಳ ಪರವಾಗಿ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿಯೇ ಗ್ರಾಹಕರನ್ನು ಕೇಳಿ ಮಾಧ್ಯಮಗಳಲ್ಲಿ ಬಳಸಬಹುದಾದ ಕನ್ನಡ ಸದಭಿರುಚಿಯ ಪದಗಳನ್ನು ಸಂಗ್ರಹಿಸಲಾಗಿದ್ದು ತಮಗೆ ಕಳುಹಿಸಿ ಕೊಡಲಾಗುತ್ತಿದ್ದು ಈ ಪದಗಳನ್ನು ಮುದ್ರಣ / ವಿದ್ಯುನ್ಮಾನ ಮಾಧ್ಯಮಗಳಲ್ಲಿ ಬಳಸುವ ಮೂಲಕ ಕನ್ನಡ ಭಾಷಾ ಬೆಳವಣಿಗೆ, ಕನ್ನಡದ ಅಸ್ಮಿತೆ ಉಳಿಸಿಕೊಳ್ಳಲು ತಮ್ಮ ಸಹಕಾರ ಸದಾ ನಮ್ಮೊಡನಿರುತ್ತದೆ ಎಂದು ಭಾವಿದಲಾಗಿದೆ ಎಂದು ಕನ್ನಡ ಪ್ರಾಧಿಕಾರದ ಅಧ್ಯಕ್ಷ ಟಿ.ಎಸ್. ನಾಗಭರಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

**ಬೆಂಗಳೂರು, ಏಪ್ರಿಲ್ 28 ( ಕರ್ನಾಟಕ ವಾರ್ತೆ ) :** ಕರ್ನಾಟಕ ಲೋಕಸೇವಾ ಆಯೋಗವು ಅಧಿಸೂಚನೆ ಸಂಖ್ಯೆ:ಪಿಎಸ್‌ಸಿ 1 ಆರ್‌ಟಿ (4)ಬಿ–2/2017, ದಿನಾಂಕ:25–11–2017 ರಲ್ಲಿ ಅಧಿಸೂಚಿಸಿರುವ ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮಾದರಿ ವಸತಿ ಶಾಲೆ (ನವೋದಯ) ಗಳಲ್ಲಿನ ಸ್ನಾತಕೋತ್ತರ ಪದವೀಧರ **'ಇಂಗ್ಲೀಷ್ ಭಾಷಾ ಶಿಕ್ಷಕರು' 06 (5 + 1 ಹೈ.ಕ.), 'ಗಣಿತಶಾಸ್ತ್ರ ಶಿಕ್ಷಕರು' 06 (5 + 1 ಹೈ.ಕ.), 'ಗಣಕಯಂತ್ರ ಶಿಕ್ಷಕರು' 06 (5 + 1 ಹೈ.ಕ.) ಮತ್ತು 'ಮಹಿಳಾ ಶುಶ್ರೂಷಕಿಯರು' (03)** ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ **ದಿನಾಂಕ:24–04–2020**ರಂದು ತಾತ್ಕಾಲಿಕ ಆಯ್ಕೆ ಪಟ್ಟಿಗಳನ್ನು ಕಟ್ ಆಫ್ ಅಂಕಗಳೊಂದಿಗೆ ಆಯೋಗದ ಅಂತರ್ಜಾಲದಲ್ಲಿ **"http://kpsc.kar.nic.in/ಪಟ್ಟಿಗಳು/ತಾತ್ಕಾಲಿಕ"** ರಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಸದರಿ ಆಯ್ಕೆಪಟ್ಟಿಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು 07 ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು–560001 ಇವರಿಗೆ ಲಿಖಿತವಾಗಿ ಸಲ್ಲಿಸಬಹುದೆಂದು ಇದಲ್ಲದೇ, ಆಕ್ಷೇಪಣೆಗಳನ್ನು ಇ–ಮೇಲ್ kpsc_ka@nic.in ಮುಖಾಂತರವೂ ಸಲ್ಲಿಸಬಹುದು. ನಿಗದಿತ ದಿನಾಂಕದ ನಂತರ ಸಲ್ಲಿಸುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಅಡಮಾನ ಸಾಲವನ್ನು ಬ್ಯಾಂಕುಗಳು ನೀಡಲು ಸೂಚನೆ

**ಬೆಂಗಳೂರು, ಏಪ್ರಿಲ್ 28 ( ಕರ್ನಾಟಕ ವಾರ್ತೆ ) :** ಕೋವಿಡ್ – 19 (ನೊವೆಲ್ ಕೊರೊನಾ ವೈರಸ್)ನ ಲಾಕ್‌ಡೌನ್ ಪ್ರಭಾವದಿಂದಾಗಿ ರಾಜ್ಯದಲ್ಲಿ ಕೃಷಿ ಉತ್ಪನ್ನಗಳ ಸಾಗಾಣಿಕೆ ಮತ್ತು ವ್ಯವಹಾರ ನೀರಿಕ್ಷಿತ ಮಟ್ಟಕ್ಕೆ ಆಗುತ್ತಿಲ್ಲವಾದ್ದರಿಂದ ಅನಿವಾರ್ಯವಾಗಿ ರೈತರು ತಮ್ಮ ಉತ್ಪನ್ನಗಳನ್ನು ಕಡಿಮೆ ಬೆಲೆಗೆ ಮಾರಾಟ ಮಾಡುವುದನ್ನು ಮನಗಂಡು ರೈತರಿಗಾಗುವ ನಷ್ಠ ತಪ್ಪಿಸಲು, ಕೃಷಿ ಬೆಲೆ ಆಯೋಗದ ಅಧ್ಯಕ್ಷರು ರಾಜ್ಯ ಮಟ್ಟದ ಬ್ಯಾಂಕರ್ಸ್ ಕಮಿಟಿ (SLBC)ಯ ಸಮನ್ವಯ ಅಧಿಕಾರಿಗಳಿಗೆ ಪತ್ರ ಬರೆದು, ರಾಜ್ಯದಲ್ಲಿ ಅಡಮಾನ ಸಾಲ (Pledge Loan)ವನ್ನು ನೀಡುವಂತೆ ಸಂಬಂಧಪಟ್ಟ ಎಲ್ಲಾ ಬ್ಯಾಂಕುಗಳಿಗೆ ಸೂಚನೆ ನೀಡುವಂತೆ ಕೋರಿ ಕೊಂಡಿರುವುದನ್ನು ಪರಿಗಣಿಸಿ ರಾಜ್ಯ ಮಟ್ಟದ ಬ್ಯಾಂಕರ್ಸ್ ಕಮಿಟಿ (SLBC) ಯ ಸಮನ್ವಯ ಅಧಿಕಾರಿಗಳು ಅಡಮಾನ ಸಾಲವನ್ನು ಬ್ಯಾಂಕುಗಳು ನೀಡುವಂತೆ ಸೂಚನೆ ನೀಡಿರುವುದಾಗಿ ಪತ್ರ ಬರೆದು ತಿಳಿಸಿರುತ್ತಾರೆ.

ಆದ್ದರಿಂದ ರಾಜ್ಯದ ರೈತರು ತಾವು ಬೆಳೆದ ಬೆಳೆಗಳನ್ನು ಕಡಿಮೆ ಬೆಲೆಗೆ ಮಾರಾಟ ಮಾಡದೆ ಕೇಂದ್ರ ಅಥವಾ ರಾಜ್ಯ ಉಗ್ರಾಣ ನಿಗಮ ಹಾಗೂ ಖಾಸಗಿ ಗೋದಾಮುಗಳಲ್ಲಿ ಸಂಗ್ರಹಿಸಿಟ್ಟು, ಅಡಮಾನ ಸಾಲ (Pledge Loan) ಪಡೆದು ಉತ್ತಮ ಬೆಲೆ ಬಂದಾಗ ಮಾರಾಟ ಮಾಡಿ ಲಾಭ ಮಾಡಿಕೊಳ್ಳಬಹುದಾಗಿದೆ ಎಂದು ಕೃಷಿ ಬೆಲೆ ಆಯೋಗದ ಅಧ್ಯಕ್ಷರಾದ ಹನುಮನಗೌಡ ಬೆಳಗುರ್ಕಿಯವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮನೆಯಲ್ಲಿಯೇ ಎಲ್ಲಾ ರೀತಿಯ ಪ್ರಾರ್ಥನೆ, ನಮಾಜ್ ನಿರ್ವಹಿಸಲು ಸೂಚನೆ

ಬೆಂಗಳೂರು, ಏಪ್ರಿಲ್ 28 ( ಕರ್ನಾಟಕ ವಾರ್ತೆ ) : ವಿಶ್ವದಾದ್ಯಂತ ವ್ಯಾಪಕವಾಗಿ ಹರಡುತ್ತಿರುವ ಕೊರೋನಾ ವೈರಸ್ ಕೋವಿಡ್–19 ಪಿಡುಗು ಹರಡದಂತೆ ತಡೆಗಟ್ಟಲು ದೇಶದಲ್ಲಿ ಜಾರಿಯಲ್ಲಿರುವ ಲಾಕ್‌ಡೌನ್ ಹಿನ್ನೆಲೆಯಲ್ಲಿ ದೇಶದ ಹಾಗೂ ಸಮಾಜದ ಆರೋಗ್ಯದ ಹಿತದೃಷ್ಟಿಯಿಂದ ಈ ಹಿಂದೆ ನೀಡಿರುವ ಸೂಚನೆಗಳಿಗೆ ಮುಂದುವರಿದು ಪವಿತ್ರ ರಂಜಾನ್ ತಿಂಗಳಿನಲ್ಲಿ ಮಸೀದಿಗಳಲ್ಲಿ ಶುಕ್ರವಾರದ ಪ್ರಾರ್ಥನೆಯನ್ನು ಒಳಗೊಂಡಂತೆ ದೈನಂದಿನ ಸಾಮೂಹಿಕ ಪ್ರರ್ಥನೆಯ ಜೊತೆಗೆ ತರಾವಿ ನಮಾಜ್‌ನ್ನು ಮಸೀದಿಗಳಲ್ಲಿ ನಿರ್ವಹಿಸುವುದನ್ನು ನಿರ್ಬಂಧಿಸಲಾಗಿದ್ದು, ಮನೆಯಲ್ಲಿಯೇ ಇದ್ದು ಎಲ್ಲಾ ರೀತಿಯ ಪ್ರಾರ್ಥನೆ, ನಮಾಜ್ ನಿರ್ವಹಿಸುವುದು.

ಪ್ರವಾದಿ ಮೊಹಮ್ಮದ್ ಪೈಗಂಬರ್‌ರವರು ಯಾವುದೇ ಸಾಂಕ್ರಾಮಿಕ ರೋಗ ಉಲ್ಬಣಗೊಂಡಾಗ ಪ್ರತಿಯೊಬ್ಬರೂ ಯಾವುದೇ ಪ್ರದೇಶಗಳಿಗೆ ತೆರಳದೇ ಮನೆಯಲ್ಲಿಯೇ ಪ್ರರ್ಥನೆ, ನಮಾಜ್‌ನ್ನು ಮಾಡುವುದರ ಕುರಿತು ಉಪದೇಶಿಸಿರುವುದರಿಂದ ಮನೆಯಲ್ಲಿದ್ದುಕೊಂಡು ಉಪವಾಸ ಆಚರಣೆ ಮಾಡಿ ಇದೇ ಮಾಹೆಯ ಅಂತಿಮ ಘಟ್ಟದಲ್ಲಿ ಇರುವ ಶಬೆ ಖದರ್ ಪವಿತ್ರ ರಾತ್ರಿಯಲ್ಲಿ ಸಕಲ ಮಾನವ ಕುಲದ ಒಳಿತಿಗಾಗಿ ಹಾಗೂ ಕೊರೋನಾ ವೈರಸ್ ಕೋವಿಡ್ – 19 ಸೋಂಕಿನ ನಿವಾರಣೆಗಾಗಿ ಅಲ್ಲಾಹುನಲ್ಲಿ ಪ್ರಾರ್ಥಿಸುವುದು.

ಪವಿತ್ರ ರಂಜಾನ್ ತಿಂಗಳ ಉಪವಾಸ ಆಚರಣೆ ಸಂಬಂಧಪಟ್ಟಂತೆ ಇಫ್ತಾರ್ ಕೂಟ ಏರ್ಪಡಿಸುವುದಾಗಲಿ ಮಸೀದಿಯ ಸುತ್ತಮುತ್ತ ಆಹಾರ ಪದಾರ್ಥದ ಅಂಗಡಿಗಳನ್ನು ತೆರೆಯುವುದಾಗಲಿ ಮತ್ತು ಯುವಕರು ರಾತ್ರಿಯಲ್ಲಿ ರಸ್ತೆ ಬೀದಿ ಮೊಹಲ್ಲಾ ಹಾಗೂ ವೃತ್ತಗಳಲ್ಲಿ ಸವಾರಿಯೊಂದಿಗೆ ಅನಾವಶ್ಯಕವಾಗಿ ಓಡಾಡುವುದಾಗಲಿ ಮಾಡಬಾರದು.

ಉಳಿದ ಮುಂತಾದ ಪ್ರಮುಖ ಅಂಶಗಳ ಕುರಿತಂತೆ ಸರ್ಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾಡಳಿತದಿಂದ ನೀಡಿರುವ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸಿ ಸಮಾಜದ ಹಿತದೃಷ್ಟಿಯನ್ನು ಕಾಪಾಡುವುದರ ಮೂಲಕ ಶಾಂತಿಯುತವಾಗಿ ಪವಿತ್ರ ರಂಜಾನ್ ಮಾಸಾಚರಣೆ ಮಾಡಲು, ರಜಿಯಾ ಸುಲ್ತಾನಾ, ಜಿಲ್ಲಾ ವಕ್ಫ್ ಅಧಿಕಾರಿ, ಬೆಂಗಳೂರು ನಗರ ಉತ್ತರ ಜಿಲ್ಲೆ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೈದ್ಯಕೀಯ ಸ್ನಾತಕೋತ್ತರ ಹಾಗೂ ಸಂಶೋಧನ ವಿದ್ಯಾರ್ಥಿಗಳಿಗೆ ಇಂಟರ್ನ್‌ಶಿಪ್‌ಗೆ ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 28 ( ಕರ್ನಾಟಕ ವಾರ್ತೆ ) : ರಾಜ್ಯದಲ್ಲಿ ಉಂಟಾಗಿರುವ ಆರೋಗ್ಯ ತುರ್ತು ಸಂದರ್ಭದಲ್ಲಿ ವೈದ್ಯಕೀಯ ಸ್ನಾತಕೋತ್ತರ ಹಾಗೂ ಸಂಶೋಧನಾ ವಿದ್ಯಾರ್ಥಿಗಳಿಂದ ಇಂಟರ್ನ್‌ಶಿಪ್ ತರಬೇತಿಗೆ ರಾಜ್ಯ ಸರ್ಕಾರ ಅರ್ಜಿ ಆಹ್ವಾನಿಸಿದೆ.

ಕೊವಿಡ್ – 19 ನಿಂದ ಉಂಟಾಗಿರುವ ಸಮಸ್ಯೆ ಸವಾಲುಗಳನ್ನು ಎದರಿಸಲು ಸಾರ್ವಜನಿಕರಿಗೆ ಹಾಗೂ ಸರ್ಕಾರಕ್ಕೆ ಸಹಾಯವಾಗುವಂತೆ ದತ್ತಾಂಶಗಳ ವಿಶ್ಲೇಷಣೆ ಹಾಗೂ ಸಾಕ್ಷ್ಯಾಧಾರ ನೀತಿ ನಿರೂಪಣೆಗಾಗಿ ಅವಶ್ಯವಿರುವ ಅಂಶಗಳನ್ನು ಪಡೆಯಲು ಇಂಟರ್ನ್‌ಶಿಪ್ ರೂಪದಲ್ಲಿ ವೈದ್ಯಕೀಯ ಶಿಕ್ಷಣದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಂದ 3 ತಿಂಗಳ ಇಂಟರ್ನ್‌ಶಿಪ್ ಕಾರ್ಯಕ್ರಮವನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದೆ. ಇಂಟರ್ನ್‌ಶಿಪ್ ಮಾಡುವ ಅಭ್ಯರ್ಥಿಗಳಿಗೆ

ಯಾವುದೇ ಸಂಭಾವನೆ ಇರುವುದಿಲ್ಲ ಆದರೆ ಅಭ್ಯರ್ಥಿಗಳಿಗೆ ಉನ್ನತ ಮಟ್ಟದ ಸರ್ಕಾರಿ ಅಧಿಕಾರಿಗಳು, ಸಂಶೋಧಕರು ಹಾಗೂ ವಿದ್ವಾಂಸರ ಜೊತೆ ಕೆಲಸ ನಿರ್ವಹಿಸುವ ಅವಕಾಶ ದೊರೆಯುತ್ತದೆ.

ಅಭ್ಯರ್ಥಿಗಳು ಆನ್‌ಲೈನ್ ಮೂಲಕ 3 ತಿಂಗಳ ವರೆಗೆ ಕೆಲಸ ಮಾಡಬಹುದಾಗಿದ್ದು, ಅಂತಹವರಿಗೆ ಸರ್ಕಾರದಿಂದ ಪ್ರಶಸ್ತಿ ಪತ್ರ ನೀಡಲಾಗುವುದು ಎಂದು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಶ್ರೀಮತಿ ಶಾಲಿನಿ ರಜನೀಶ್ ಅವರು ತಿಳಿಸದ್ದಾರೆ.

ಅಭ್ಯರ್ಥಿಗಳು ಒಂದು ವಾರದೊಳಗೆ http://sevasindhu.karnataka.gov.in ವೆಬ್‌ಸೈಟ್‌ನಲ್ಲಿ ಹೆಚ್ಚಿನ ಮಾಹಿತಿ ಪಡೆದುಕೊಂಡು ಅರ್ಜಿ ಸಲ್ಲಿಸಬಹುದಾಗಿದೆ.

# ನೀರಿನ ಬಿಲ್ ಪಾವತಿ

**ಬೆಂಗಳೂರು, ಏಪ್ರಿಲ್ 28 ( ಕರ್ನಾಟಕ ವಾರ್ತೆ )** :ಬೆಂಗಳೂರು ಜಲಮಂಡಳಿಯು ನೀರು ಸರಬರಾಜು ಕೊಳವೆಯಲ್ಲಿ ಸೋರುವಿಕೆಯನ್ನು ಸಾರ್ವಜನಿಕರಿಂದ ಅಥವಾ ಮಂಡಳಿಯ ಸಿಬ್ಬಂದಿಯವರು ಗುರುತಿಸಿದ ತಕ್ಷಣ ಸೋರುವಿಕೆ ತಡೆಗಟ್ಟಲು ಕ್ರಮವಹಿಸಲಾಗುತ್ತದೆ. ಇದಲ್ಲದೆ ಕಲುಷಿತ ನೀರು ಸರಬರಾಜಾಗುತ್ತಿದ್ದಲ್ಲಿ ತಕ್ಷಣ ಕ್ರಮವಹಿಸಿ ಕಲುಷಿತ ನೀರು ಸರಬರಾಜು ಕೊಳವೆಗೆ ಸೇರದಂತೆ ಕೂಡಲೇ ಕಾರ್ಯ ಪ್ರವೃತ್ತರಾಗಿ ಕ್ರಮವಹಿಸಲಾಗುತ್ತದೆ. **ಕಾಲರಾ ಮತ್ತು ಜಿ.ಇ.** ಗೆ ಸಂಬಂಧಿಸಿದ ಮಾಹಿತಿಯನ್ನು ಸಾಂಕ್ರಾಮಿಕ ರೋಗಗಳ ಆಸ್ಪತ್ರೆಯಿಂದ ದಿನಾಂಕ 01.04.2020 ರಿಂದ 27.04.2020 ರವರೆಗೆ ನೋಂದಣಿಯಾದ ಪ್ರಕರಣಗಳ ವಿಳಾಸವನ್ನು ಪಡೆದು ಅಂತಹ ಸ್ಥಳಗಳಿಂದ ನೀರಿನ ಮಾದರಿಯನ್ನು ಸಂಗ್ರಹಿಸಲಾಗಿ, ಕ್ರೋಢೀಕರಿಸಿದ ಫಲಿತಾಂಶದ ಸಂಪೂರ್ಣ ವಿವರವನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿರುವುದು. ಫಲಿತಾಂಶದ ಸಂಕ್ಷಿಪ್ತ ವಿವರ ಈ ಕೆಳಕಂಡಂತಿದೆ.

ದಿನಾಂಕ 01.04.2020 ರಿಂದ 27.04.2020 ರವರೆಗೆ ದಾಖಲುಗೊಂಡ ಒಟ್ಟು 65 ನೀರಿನ ಮಾದರಿಯನ್ನು ಸಂಗ್ರಹಿಸಿದ್ದು, 02 ಮಾದರಿಗೆ ಸಂಬಂಧಿಸಿದ ಪ್ರದೇಶಗಳಲ್ಲಿ ನೀರು ಸರಬರಾಜು ಇಲ್ಲದಿದ್ದ ಕಾರಣ ನೀರಿನ ಮಾದರಿಯನ್ನು ಸಂಗ್ರಹಿಸಿರುವುದಿಲ್ಲ, 44 ಮಾದರಿಗೆ ಸಂಬಂಧಿಸಿದ ನೀರಿನ ಮಾದರಿಗಳನ್ನು ಸಂಗ್ರಹಿಸಲಾಗಿದ್ದು, **41 ಮಾದರಿಯ ಫಲಿತಾಂಶವು ಕುಡಿಯಲು ಯೋಗ್ಯವಾಗಿರುತ್ತದೆ**. 03 ಪ್ರಕರಣದ ಫಲಿತಾಂಶವು ನಿರೀಕ್ಷಣೆಯಲ್ಲಿರುತ್ತದೆ. ಉಳಿದ 19 ಮಾದರಿಗಳಿಗೆ ಸಂಬಂಧಿಸಿದ ಪ್ರದೇಶಗಳು ಜಲ ಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ.

**ನಗರದಲ್ಲಿ ಕೋವಿಡ್ -19 ಹರಡುತ್ತಿರುವ ಹಿನ್ನೆಲೆಯಲ್ಲಿ ಅಂತರ ಕಾಯ್ದುಕೊಳ್ಳಬೇಕಾಗಿರುವ ಕಾರಣ ಜಲಮಂಡಳಿಯ ಮಾಪನ ಓದುಗರು ಮನೆಮನೆಗೆ ತೆರಳಿ ನೀರಿನ ಬಿಲ್‌ಅನ್ನು ವಿತರಿಸಲು ಸಾಧ್ಯವಾಗದಿರುವುದರಿಂದ ನೀರಿನ ಬಿಲ್‌ನ ಮಾಹಿತಿಯನ್ನು ಜಲಮಂಡಳಿಯಲ್ಲಿ ಲಭ್ಯವಿರುವ ಗ್ರಾಹಕರ ಮೊಬೈಲ್ ನಂಬರ್‌ಗಳಿಗೆ ವಾಚನ ದಿನವಹಿ ಎಸ್.ಎಂ.ಎಸ್.ಮುಖಾಂತರ ಕಳುಹಿಸಲಾಗುತ್ತಿದ್ದು, ಎಸ್.ಎಂ.ಎಸ್.ನಲ್ಲಿರುವ ಲಿಂಕ್ ಮುಖಾಂತರ ನೀರಿನ ಬಿಲ್‌ಅನ್ನು ಪಾವತಿಸಬಹುದಾಗಿರುತ್ತದೆ.**

**ಗ್ರಾಹಕರು ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ವಾಟ್ಸ್‌ಆಪ್ ಸಂಖ್ಯೆ:8762228888 ಗೆ ತಮ್ಮ ಹೆಸರು, ಆರ್.ಆರ್. ಸಂಖ್ಯೆ ಮತ್ತು ಮೊಬೈಲ್ ಸಂಖ್ಯೆ ಯನ್ನು ಕಳುಹಿಸಿ ನೋಂದಾಯಿಸಿಕೊಂಡಲ್ಲಿ ನೀರಿನ ಬಿಲ್ಲಿನ ವಿವರವನ್ನು ತಮ್ಮ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್ ಮೂಲಕ ಕಳುಹಿಸಲಾಗುವುದು.**

**ಇದಲ್ಲದೆ ಜಲಮಂಡಳಿಯ ಅಧಿಕೃತ ವೆಬ್‌ಸೈಟ್ : www.bwssb.gov.in ನಲ್ಲಿ ಎಲ್ಲಾ ಗ್ರಾಹಕರ ಬಿಲ್‌ಗಳನ್ನು ವಾಚನ ದಿನವಹಿ ಪ್ರಕಟಿಸಲಾಗುತ್ತಿದ್ದು, ನೀರಿನ ಬಿಲ್ ಪಾವತಿಯನ್ನು ಮಂಡಳಿಯ ವೆಬ್‌ಸೈಟ್ ಹಾಗೂ ಆನ್‌ಲೈನ್ ಪೇಮೆಂಟ್ ಸೇವೆಗಳಾದ BBPS(Bharat Bill Payment System)ನಿಂದ ಲಭ್ಯವಿರುವ Paytm, Phone-Pe, Google Pay, ಮುಖಾಂತರವಾಗಿಯೂ ಮಾಡಬಹುದಾಗಿರುತ್ತದೆ. ಗ್ರಾಹಕರು ಇದರ ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ.**

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ಸಹಾಯವಾಣಿಯ ಸಂಖ್ಯೆ:22238888 ಹಾಗೂ 1916 ಮತ್ತು ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ. ತಮ್ಮ ಸಮೀಪದ

ಸೇವಾಠಾಣೆಯ ದೂರವಾಣಿ ಸಂಖ್ಯೆಯನ್ನು ಮಂಡಳಿಯ ಅಧಿಕೃತ ವೆಬ್‌ಸೈಟ್:www.bwssb.gov.in ನಲ್ಲಿ ಪಡೆಯಬಹುದಾಗಿರುತ್ತದೆ.

# payment of water bills

Bengaluru, April 28 (Karataka Information): BWSSB immediately take action to stop the leakage as soon as water leakages are detected and reported from public or from staff of BWSSB. Adding to this, if contamination of water is detected it is taken care that contaminated water does not get in contact to the water supply pipe lines. BWSSB collected address of the cases reported about Cholera and GE from Health & Family Welfare Department, Government Epidemic Disease Hospital, Bangalore, 01.04.2020 to 27.04.2020 tested the samples and results of the samples are enclosed with this letter. The abstract of the result is as mentioned below.

Among the 65 cases reported from 01.04.2020 to 27.04.2020, samples from 02 area was not collected since water supply for that area was not on the day when the water sample were collected, samples from 44 areas were collected and result of **all 41 samples were obtained as suitable for potable purpose(SPP**). 03 sample result is awaited. The areas of remaining 19 cases does not comes under BWSSB limits.

**Since COVID-19 is spreading in the city rapidly, in the view of maintaining social distance, BWSSB's meter reader cannot issue the bill by taking meter reading from each house. Water bill details are being sent through SMS reading day wise for the mobile numbers of customers that are available in the Board and payment can be made by clicking on the link provided in the SMS.**

**All customers are requested to register the details by sending their name, R.R. Number and mobile number to 24/7 BWSSB call center whatsapp number :8762228888 and thus water bill details will be sent to their registered mobile number through SMS**

**Along with this, water bills of all consumers are being published reading day wise in BWSSB official website: www.bwssb.gov.in and payment can be made through the website. Payment can also be made through online services of BBPS (Bharath Bill Payment System) like Paytm, Phone pe, Google pay etc.**

It is also informed that BWSSB Call center number 080-22238888 is available 24/7 to receive the complaint of customers. Along with this, whatsapp number:8762228888 and toll free number 1916 is also available. Service station address and contact details can be obtained through BWSSB official **web site :www.bwssb.gov.in .**

# 8181 ಕೋಟಿ ರೂ. ವೆಚ್ಚದ ವಾರ್ಷಿಕ ಕ್ರಿಯಾ ಯೋಜನೆ ಮಂಜೂರಾತಿಗೆ ಗೋವಿಂದ ಕಾರಜೋಳ ಮನವಿ

**ಬೆಂಗಳೂರು, ಏಪ್ರಿಲ್ 28 ( ಕರ್ನಾಟಕ ವಾರ್ತೆ ) :** ರಾಜ್ಯ ಸರ್ಕಾರವು 8181 ಕೋಟಿ ರೂ. ವೆಚ್ಚದ 2020-21 ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯ ಪ್ರಸ್ತಾವನೆಯನ್ನು ಕೇಂದ್ರ ಭೂ ಸಾರಿಗೆ ಸಚಿವಾಲಯಕ್ಕೆ ಸಲ್ಲಿಸಿದ್ದು, ಈ ಪ್ರಸ್ತಾವನೆಯನ್ನು ಶೀಘ್ರವಾಗಿ ಮಂಜೂರು ಮಾಡುವಂತೆ ಕೇಂದ್ರ ಭೂ ಸಾರಿಗೆ ಸಚಿವರಿಗೆ ಉಪಮುಖ್ಯಮಂತ್ರಿಯರವಾದ ಗೋವಿಂದ ಎಂ ಕಾರಜೋಳ ಅವರು ಮನವಿ ಮಾಡಿದರು.

ಕೇಂದ್ರ ಭೂ ಸಾರಿಗೆ ಸಚಿವರಾದ ನಿತಿನ್ ಗಡ್ಕರಿ ಅವರು ಎಲ್ಲಾ ರಾಜ್ಯಗಳ ಲೋಕೋಪಯೋಗಿ ಹಾಗೂ ಸಾರಿಗೆ ಸಚಿವರೊಂದಿಗೆ ನಡೆಸಿದ ವಿಡಿಯೋ ಸಂವಾದದಲ್ಲಿ ಮಾತನಾಡಿದ ಡಿಸಿಎಂ, 2019-20 ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ 1289 ಕೋಟಿ ರೂ. ವೆಚ್ಚದ 7 ಕಾಮಗಾರಿಗಳಿಗೆ ಕೇಂದ್ರ ಭೂ ಸಾರಿಗೆ ಸಚಿವಾಲಯವು ಮಂಜೂರಾತಿ ನೀಡಬೇಕಿದೆ. 2019-20 ರಲ್ಲಿ ಮಂಜೂರಾತಿಯಾದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು 350.50 ಕೋಟಿ ರೂ. ಅನುದಾನವನ್ನು ಬಿಡುಗಡೆ ಮಾಡಬೇಕಿದೆ. 2020-21 ನೇ ಸಾಲಿನ ಉಳಿದ ಮೊತ್ತವಾದ 135 ಕೋಟಿ ರೂ. ಅನುದಾನ ಮಂಜೂರು ಮಾಡಬೇಕಿದೆ. ಅಂತರ್ ರಾಜ್ಯಗಳಿಗೆ ಸಂಪರ್ಕ ಕಲ್ಪಿಸಲು ಹಾಗೂ ಆರ್ಥಿಕವಾಗಿ ಅಭಿವೃದ್ಧಿ ಪಡಿಸಲು ಅನುಕೂಲವಾಗುವಂಹ ಎಐ ಮತ್ತು ಐಸಿ ಯೋಜನೆಯಡಿ ಕಳೆದ 2 ವರ್ಷಗಳಿಂದ ಯಾವುದೇ ಯೋಜನೆ ಕಾಮಗಾರಿಗಳಿಗೆ ಮಂಜೂರು ಮಾಡಿರುವುದಿಲ್ಲ. ರಾಜ್ಯ ಸರ್ಕಾರವು ಈ ಯೋಜನೆಯಡಿ 2020-21 ನೇ ಸಾಲಿನ 285 ಕೋಟಿ ರೂ. ವೆಚ್ಚದ 4 ಕಾಮಗಾರಿಗಳ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಈ ಎಲ್ಲಾ ಪ್ರಸ್ತಾವನೆಗಳನ್ನು ಮಂಜೂರು ಮಾಡುವಂತೆ ಉಪಮುಖ್ಯಮಂತ್ರಿಯವರು ಮನವಿ ಮಾಡಿದರು.

ಕೊರೊನಾ ನಿಯಂತ್ರಣಕ್ಕೆ ಪೂರಕ ನಿರ್ದೇಶನಗಳನ್ನು ಅನುಸರಿಸಿ ಕೆಂಪು ವಲಯಗಳನ್ನು ಹೊರತುಪಡಿಸಿ ಉಳಿದ ವಲಯಗಳಲ್ಲಿ ಕೇಂದ್ರ ಸರ್ಕಾರವು ಮಂಜೂರಾತಿ ನೀಡಿದ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ನೀರು ಸಂಗ್ರಹಕ್ಕೆ ಅನುಕೂಲವಾಗುವಂತೆ ಮಹಾರಾಷ್ಟ್ರದ ಮಾದರಿಯ ಬ್ರಿಡ್ಜ್ ಕೆಳಭಾಗದಲ್ಲಿ ವಿಯರ್ ನಿರ್ಮಾಣ ಕಾಮಗಾರಿಗಳನ್ನು ಈಗಾಗಲೇ ಪ್ರಾರಂಭಿಸಲಾಗಿದೆ. ಕೊರೊನಾ ವೈರಸ್ ನಿಯಂತ್ರಣಕ್ಕೆ ಸರ್ಕಾರದ ನಿರ್ದೇಶನಗಳನ್ನು ಅಳವಡಿಸಿಕೊಂಡು ರಸ್ತೆ ನಿರ್ಮಾಣ ಕಾಮಗಾರಿಗಳು, ಕಟ್ಟಡ

ಕಾರ್ಮಿಕರು ಹಾಗೂ ಸಿಬ್ಬಂದಿ ವರ್ಗದವರು, ವಾಹನ ಚಾಲಕರು, ಸಹಾಯಕರು ಮಾಸ್ಕ್, ಸ್ಯಾನಿಟೈಜರ್‌ಗಳನ್ನು ಉಪಯೋಗಿಸಿಕೊಂಡು, ಕಾರ್ಯನಿರ್ವಹಿಸುವಂತೆ ಕ್ರಮಕೈಗೊಳ್ಳಲಾಗಿದೆ. ಕಾಮಗಾರಿಗಳ ಸ್ಥಳಗಳಲ್ಲಿ ಸಾಮಾಜಿಕ ಅಂತರವನ್ನು ಕಾಯ್ದುಕೊಂಡು ಕಾರ್ಯನಿರ್ವಹಿಸಲಾಗುತ್ತಿದೆ. ಸರಕು ಸಾಗಾಣಿಕೆ, ಕೃಷಿ, ತೋಟಗಾರಿಕೆ ಉತ್ಪನ್ನಗಳ ಸಾಗಾಣಿಕೆ ವಾಹನಗಳು ಸಂಚರಿಸುವಂತೆ ಕ್ರಮಕೈಗೊಳ್ಳಲಾಗಿದೆ. ರೈತರಿಗೆ, ಕೃಷಿ ಕರ್ಮಿಕರಿಗೆ ಯಾವುದೇ ಅಡೆತಡೆಯಾಗದಂತೆ ಪೂರಕ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. ಕೊರೊನಾ ನಿಯಂತ್ರಣಕ್ಕಾಗಿ ರಾಜ್ಯ ಸರ್ಕಾರ ಶಕ್ತಿ ಮೀರಿ ಶ್ರಮಿಸುತ್ತಿದೆ ಎಂದು ಗೋವಿಂದ ಎಂ ಕಾರಜೋಳ ಅವರು ವಿವರಿಸಿದರು.

ಉಪಮುಖ್ಯಮಂತ್ರಿಯವರಾದ ಲಕ್ಷ್ಮಣ ಸವದಿ ಸಾರಿಗೆ ಸಂಸ್ಥೆಗಳ ಸ್ಥಿತಿಗತಿ, ಸಂಚಾರ ವ್ಯವಸ್ಥೆ ಕುರಿತು ವಿವರಿಸಿದರು. ಲೋಕೋಪಯೋಗಿ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿ ರಜನೀಶ್ ಗೋಯಲ್, ಕಾರ್ಯದರ್ಶಿ ಬಿ. ಗುರುಪ್ರಸಾದ್, ಸಾರಿಗೆ ಇಲಾಖೆಯ ಪ್ರಧಾನ ಕಾರ್ಯದರ್ಶಿ ಗೌರವ ಗುಪ್ತ, ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಶಿವಯೋಗಿ ಕಳಸದ ಮತ್ತಿತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.